# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ನರಸನಗೌಡ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ ಹಾಗೂ ಶ್ರೀ ಪರಮೇಶ್ವರಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಡಕೋಳ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. ಕಂಪ್ಲೇಂಟ್\ಉಪಲೋಕ್\ಬಿಜಿಎಂ\1340\2017\ಉನಿವಿ-4, ದಿನಾಂಕ 03.11.2018

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 28.09.2018ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ದೂರುದಾರರಾದ ಶ್ರೀ ಬಸವರಾಜ ವೀರಬಸಪ್ಪ ಕರಡಗಿ, ಕಡಕೋಳ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ಹಾವೇರಿ ಜಿಲ್ಲೆಯ ಸವಣೂರು ತಾಲ್ಲೂಕು, ಕಡಕೋಳ ಗ್ರಾಮದ ವಿಪಿಸಿ ನಂ.920/1 ಪ್ಲಾಟ್ ನಂ.40/1 ಆಸ್ತಿ ತಮ್ಮ ಮಾಲೀಕತ್ವದಲ್ಲಿದ್ದು, ಅದರಲ್ಲಿ ಪ್ಲೇನಿಂಗ್ ಯಂತ್ರ ಮತ್ತು ಶ್ಯಾವಿಗೆ ಯಂತ್ರ ಹಾಕಿಕೊಂಡು ಉದ್ಯೋಗ ಮಾಡುತ್ತಿದ್ದು, ಸದರಿ ಸ್ವತ್ತಿನ ಪಕ್ಕದಲ್ಲಿ ಚಾಣುಕ್ಯ ಬಾರ್ ಮತ್ತು ರೆಸ್ಟೋರೆಂಟನ್ನು ರಿ.ಸ.ನಂ.154/ಆ3 ರಲ್ಲಿ ಪ್ರಾರಂಭಿಸಿದ್ದು, ಸದರಿ ಸವತ್ತು ಶ್ರೀ ಬಸವರಾಜ ಮೇಲಗೇರಪ್ಪ ಕೌದಿ ಅವರ ಹೆಸರಿನಲ್ಲಿದೆ, ಸದರಿ ಸ್ವತ್ತಿನಲ್ಲಿರುವ ಅನಧಿಕೃತ ಕಟ್ಟಡಕ್ಕೆ ವಿದ್ಯುಚ್ಛಕ್ತಿ ಸಂಪರ್ಕ ಪಡೆಯಲು ತಮಗೆ ಸೇರಿದ ಆಸ್ತಿಯಲ್ಲಿ ತಮ್ಮ ಒಪ್ಪಿಗೆ ಇಲ್ಲದೇ 2) ಶ್ರೀ ನರಸನಗೌಡ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ ಹಾಗೂ 3) ಶ್ರೀ ಪರಮೇಶ್ವರಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಡಕೋಳ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳು ಕಾನೂನುಬಾಹಿರವಾಗಿ ಧೃಢೀಕರಣ ಪತ್ರ ನೀಡಿರುತ್ತಾರೆಂದು ಹಾಗೂ ಶ್ರೀ ಪವನ್ ಕುಮಾರ್, ಹೆಸ್ಕಾಂ ಕಿರಿಯ ಅಭಿಯಂತರರು ಇವರು ಸಹ ದಾಖಲೆಗಳನ್ನು ಸರಿಯಾಗಿ ಪರಿಶೀಲಿಸದೆ ಮತ್ತು ಸ್ಥಳ ಪರಿಶೀಲನೆ ಮಾಡದೆ ರಿ.ಸ.ನಂ. 154/ಅ3 ರಲ್ಲಿ ಅನಧಿಕೃತವಾಗಿ ಬಾರ್ ನಡೆಸಲು ವಿದ್ಯಚ್ಛಕ್ತಿ ಪರವಾನಗಿಯನ್ನು ನೀಡಿದ್ದಾರೆಂದು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿರುತ್ತಾರೆ.

ಕಡಕೋಳ ಗ್ರಾಮದ ಸರ್ವೆ ನಂ.154/ಆ3 ರ ಸ್ವತ್ತು ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತನೆಗೊಂಡಿದೆತೆ! ಅಥವಾ ಇಲ್ಲವೇ! ಎಂಬ ಬಗ್ಗೆ ಪರಿಶೀಲನೆ ನಡೆಸದೆ, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಚಾಣುಕ್ಯ ಬಾರ್ ಮತ್ತು ರೆಸ್ಟೋರೆಂಟ್ ನಡೆಸಲು ಪಂಚಾಯತಿ ಅಧ್ಯಕ್ಷರು ಮತ್ತು 2ನೇ ಎದುರುದಾರರು ಅಬಕಾರಿ ಉಪ ಆಯುಕ್ತರು, ಹಾವೇರಿ ರವರಿಗೆ ನಿರಾಪೇಕ್ಷಣಾ ಪತ್ರ ನೀಡಿ ಕರ್ತವ್ಯ ಲೋಪ ಎಸಗಿರುವುದು ಸಾಬೀತಾಗಿದೆ. ಸದರಿ ಮದ್ಯದ ಅಂಗಡಿ ಇರುವ ಜಾಗದ ಆಸ್ತಿ ಸಂಖ್ಯೆ: 920/1 ಎಂದೂ ಮತ್ತು ಸದರಿ ಆಸ್ತಿಯು ಗ್ರಾಮಠಾಣಾದಲ್ಲಿದೆ ಹಾಗೂ ಶ್ರೀ ಬಸವರಾಜ ಮೇಲಗಿರಿಯಪ್ಪ ಕೌದಿರವರ ಹೆಸರಿನಲ್ಲಿದೆಯೆಂದು ಮತ್ತು ಸದರಿ ಆಸ್ತಿಗೆ ವಿದ್ಯುತ್ ಸೌಲಭ್ಯ ಕಲ್ಪಿಸಿಕೊಡಲು ಆಕ್ಷೇಪಣೆ ಇಲ್ಲವೆಂದು 3ನೇ ಎದುರುದಾರರು ದಾಖಲೆಗಳನ್ನು ಪರಿಶೀಲಿಸದೆ ದಿನಾಂಕ 15.09.2016ರಂದು ಧೃಢೀಕರಣ ಪತ್ರವನ್ನು ನೀಡಿ, ಕರ್ತವ್ಯಲೋಪ್ಯಸಗಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಮತ್ತು ಆಕ್ಷೇಪಣೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, 2 ಮತ್ತು 3ನೇ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ /ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬಂದು, 2 ಮತ್ತು 3ನೇ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂದು ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಎದುರುದಾರರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, 2 ಮತ್ತು 3ನೇ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಹಾಗೂ 2ನೇ ಎದುರುದಾರರು ನಿವೃತ್ತಿ ಹೊಂದಿರುವುದರಿಂದ ಕ.ನಾ.ಸೇ.ನಿ. 214(2)(ಬಿ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, 2 ಮತ್ತು 3ನೇ ಎದುರುದಾರರಾದ ಶ್ರೀ ನರಸನಗೌಡ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ ಹಾಗೂ ಶ್ರೀ ಪರಮೇಶ್ವರಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಡಕೋಳ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 528 ಗ್ರಾಪಂಕಾ 2018, ಬೆಂಗಳೂರು, ದಿನಾಂಕ 07.12.2018</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ನರಸನಗೌಡ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕಡಕೋಳ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸರ್ಕಾರವು ಮಂಜೂರಾತಿ ನೀಡಿ, ಶ್ರೀ ನರಸನಗೌಡ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ ಹಾಗೂ ಶ್ರೀ ಪರಮೇಶ್ವರಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಡಕೋಳ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ನಿಯಮ–214 ರ ಅಥವಾ ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
(ಗ್ರಾಮೀಣಾಭಿವೃದ್ದಿ ಮತ್ತು ಪಂ.ರಾಜ್ ಇಲಾಖೆ)

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ ಜಿಲ್ಲೆ,
5) ಕಾರ್ಯನಿರ್ವಾಹಕ ಅಧಿಕಾರಿ, ಸವಣೂರು ತಾಲ್ಲೂಕು ಪಂಚಾಯತಿ, ಸವಣೂರು, ಹಾವೇರಿ ಜಿಲ್ಲೆ,
(ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ ಸ್ವೀಕೃತಿಯನ್ನು ಸರ್ಕಾರಕ್ಕೆ ಸಲ್ಲಿಸಲು ತಿಳಿಸಿದೆ)
6) ಶ್ರೀ ನರಸನಗೌಡ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ ಕಡಕೋಳ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ
7) ಶ್ರೀ ಪರಮೇಶ್ವರಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಡಕೋಳ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ
8) ಗಣಕ ಕೋಶ – ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.